## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 314(334) |
| ಮಾನ್ಯ ಸದಸ್ಯರ ಹೆಸರು: | ಶ್ರೀ ಐವನ್ 'ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು: | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |
| ಉತ್ತರಿಸಬೇಕಾದ ದಿನಾಂಕ: | 10.03.2025. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅನೇಕ ಕನ್ನಡ ಮಾಧ್ಯಮ ಶಾಲೆಗಳು ವಿದ್ಯಾರ್ಥಿಗಳ ಸಂಖ್ಯೆ ಕೊರತೆಯಿಂದ ಮುಚ್ಚಲ್ಪಟ್ಟಿದ್ದು, ಈ ಕಟ್ಟಡಗಳನ್ನು ಯಾವ ಉದ್ದೇಶಕ್ಕಾಗಿ ಬಳಕೆ ಮಾಡಲು ಸರ್ಕಾರ ಉದ್ದೇಶಿಸಿದೆ: (ವಿವರ ನೀಡುವುದು) | **ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಸಂಬಂಧಿಸಿದಂತೆ:-**<br>ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಈವರೆಗೆ ಒಟ್ಟು 18 ಸರಕಾರಿ ಪ್ರಾಥಮಿಕ ಶಾಲೆಗಳನ್ನು ಮಕ್ಕಳ ಕೊರತೆಯಿಂದ ತಾತ್ಕಾಲಿಕವಾಗಿ ಮುಚ್ಚಲಾಗಿರುತ್ತದೆ. ಭವಿಷ್ಯದಲ್ಲಿ ಮಕ್ಕಳ ದಾಖಲಾತಿಯಾದಲ್ಲಿ ಪುನರಾರಂಭಿಸುವ ಉದ್ದೇಶದಿಂದ ಶಾಲಾ ಕಟ್ಟಡಗಳನ್ನು ಶಿಕ್ಷಣ ಇಲಾಖೆಯ ಸುಪರ್ದಿಯಲ್ಲಿ ಇಟ್ಟುಕೊಳ್ಳಲಾಗಿರುತ್ತದೆ. |
| ಆ) | ಈ ಜಿಲ್ಲೆಯಲ್ಲಿ ವಿದ್ಯಾರ್ಥಿಗಳ ಕೊರತೆಯಿಂದ ಈವರೆಗೆ ಮುಚ್ಚಲ್ಪಟ್ಟ ಒಟ್ಟು ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು: ಈ ಶಾಲೆಗಳ ಕಟ್ಟಡ ಮತ್ತು ಸ್ಥಳವನ್ನು ಯಾರು ನಿರ್ವಹಣೆ ಮಾಡುವವರು: (ವಿವರ ನೀಡುವುದು) | **ಸರ್ಕಾರಿ ಪ್ರೌಢಶಾಲೆಗಳಿಗೆ ಸಂಬಂಧಿಸಿದಂತೆ:-**<br>ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಯಾವುದೇ ಸರ್ಕಾರಿ ಪ್ರೌಢ ಶಾಲೆಯನ್ನು ಮುಚ್ಚಿರುವುದಿಲ್ಲ. |
| ಇ) | ಮುಚ್ಚಲ್ಪಟ್ಟ ಶಾಲೆಗಳನ್ನು ಅಂಗನವಾಡಿ ಕೇಂದ್ರುವನ್ನಾಗಿ ಉಪಯೋಗಿಸಲು ಇಲಾಖೆ ಅನುಮತಿ ನೀಡಿದೆಯೇ: (ವಿವರ ನೀಡಿವುದು) | ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ಪ್ರಸ್ತಾವನೆ ಬಂದಲ್ಲಿ ನಿಯಮಾನುಸಾರ ಪರಿಶೀಲಿಸಲಾಗುವುದು. |
| ಈ) | ಮಂಗಳೂರು ನಗರದಲ್ಲಿ ಎಷ್ಟು ಅಂಗನವಾಡಿ ಕೇಂದ್ರುಗಳಿಗೆ ಕಟ್ಟಡ/ಸ್ಥಳವನ್ನು ಗುರುತಿಸಿರುವುದಿಲ್ಲ? (ವಿವರ ನೀಡುವುದು). | ಮಂಗಳೂರು ನಗರದಲ್ಲಿ 97 ಅಂಗನವಾಡಿ ಕೇಂದ್ರುಗಳಿಗೆ ಕಟ್ಟಡ /ಸ್ಥಳವನ್ನು ಗುರುತಿಸಿರುವುದಿಲ್ಲ. ಸದರಿ ಅಂಗನವಾಡಿ ಕೇಂದ್ರುಗಳು 48, ಬಾಡಿಗೆ ಕಟ್ಟಡ, 35 ಶಾಲಾ ಕಟ್ಟಡ, 14 ಸಮುದಾಯ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ. |

**ಇಪಿ 16 ಪಿಎಂಎ 2025**

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು